

ಅರುಣ ಪಿ. ಭಟ್ಟ


## ವಾರಭವಿಷ್ಯ: 18.09.2025ರಿಂದ 24.09.2025ರವರೆಗೆ




ಭೂಮಿ ವ್ಯವಹಾರಗಳಲ್ಲಿ ಒಳ್ಳೆ ಲಾಭ ಗಳಿಸುವ ಅವಕಾಶ ಇದೆ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆಗಳಿವೆ. ಯಾವುದೇ ಮುಖ್ಯ ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ನಾಲ್ಕು ಬಾರಿ ಪರಿಶೀಲನೆ ನಡೆಸಿ. ಹೆಚ್ಚಿನ ಖರ್ಚು ಮಾಡಲಿದ್ದೀರಿ. ಕೆಲವರಿಗೆ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ ಹೆಚ್ಚಿದೆ. ಶುಭದಿನ: 19. ಹನುಮಾನ್ ಚಾಲೀಸ್ ಓದಿರಿ.

ನೀವು ನಂಬಿದ ವಿಚಾರಗಳನ್ನು ಪ್ರಸ್ತುತಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಹಳೆಯ ಸ್ನೇಹಿತರು ಸಾಲ ಕೇಳಿದರು ಎಂದು ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಕಾಗದ ಪತ್ರಗಳನ್ನು ಕಳೆದುಕೊಳ್ಳುವ ಸಾಧ್ಯತೆಯಿದೆ. ಅನಿವಾರ್ಯವಾಗಿ ಜವಾಬ್ದಾರಿ ಬಂದರೆ ಎಚ್ಚರಿಕೆಯಿಂದ ನಿರ್ವಹಿಸಿ. ಶುಭದಿನ: 20. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ಇದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ದೊಡ್ಡ ಮಟ್ಟದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ. ಶುಭದಿನ: 22. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.

ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಕ್ರೀಡಾ ಕ್ಷೇತ್ರದಲ್ಲಿ ಇರುವವರು ಸರಿಯಾದ ಸಿದ್ಧತೆಯಿಂದ ಯಶಸ್ಸು ಪಡೆಯಬಹುದು. ಶುಭದಿನ: 21. ವಿಷ್ಣುಸಹಸ್ರನಾಮ ಓದಿರಿ.









ನಿಮ್ಮ ವರ್ಚಸ್ಸಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಶ್ರಮದ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಪೋಷಕರಿಗೆ ಮಕ್ಕಳ ನಡವಳಿಕೆಯಿಂದ ಸಂತೋಷ ಉಂಟಾಗುತ್ತದೆ. ಶುಭದಿನ: 20. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.

ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ. ನಿಮಗೂ ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ವಾರದ ಮೊದಲಾರ್ಧದ ನಂತರ ಆರ್ಥಿಕವಾಗಿ ಬಲ ಬರುತ್ತದೆ. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ– ಸಂತೋಷ ಉಂಟಾಗುತ್ತದೆ. ಬಾಕಿ ಹಣ ಬರಬೇಕಾಗಿದ್ದಲ್ಲಿ ಬರುವ ಅವಕಾಶ ಹೆಚ್ಚಿರುತ್ತದೆ. ಶುಭದಿನ: 19. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭವಿದೆ. ಉದ್ಯೋಗದಲ್ಲಿ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರುಪೇರಾಗುತ್ತದೆ. ಸೋದರ– ಸೋದರಿಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗವಿದೆ. ಶುಭದಿನ: 23. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.


ಹೊಸದಾಗಿ ಮನೆ ಕಟ್ಟಬೇಕು ಎಂದು ಆಲೋಚನೆ ಮಾಡುತ್ತಿರುವವರಿಗೆ ಯೋಜನೆಯನ್ನು ಅನುಷ್ಠಾನಕ್ಕೆ ಸೂಕ್ತ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜತೆಗೆ ಉತ್ತಮ ಸಂಬಂಧ ಇರುತ್ತದೆ. ಪ್ರೀತಿ– ಪ್ರೇಮದಲ್ಲಿ ಇರುವವರು ಸಂಗಾತಿ ಜತೆಗೆ ಪ್ರಮುಖ ವಿಚಾರಗಳನ್ನು ಚರ್ಚೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆಗಳನ್ನು ಕಾಣುತ್ತೀರಿ. ಶುಭದಿನ: 24. ಶಿವಪೂಜೆ, ಶಿವಪಂಚಾಕ್ಷರಸ್ತೋತ್ರ ಪಠಿಸಿರಿ.





ಉದ್ಯೋಗಸ್ಥರಿಗೆ ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಸ್ಥರಿಗೆ ಸಮಸ್ಯೆಗಳು ಎದುರಾಗುವ ಸಂಭವ. ಆರೋಗ್ಯದಲ್ಲಿ ಸ್ವಲ್ಪ ತೊಂದರೆ ಕಾಣಿಸಿಕೊಳ್ಳುವ ಸಂಭವ ಇದೆ. ವಿವಾಹಿತರಿಗೆ ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜತೆಗೆ ಸುಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಭೂಮಿ ಖರೀದಿಗೆ ಒಳ್ಳೆಯ ಸಮಯ. ಶುಭದಿನ: 22. ದೇವ್ಯಪರಾಧ ಕ್ಷಮಾಪಣ ಸ್ತೋತ್ರ ಪಠಿಸಿರಿ.

ಸಾಮಾಜಿಕವಾಗಿ ಉತ್ತಮ ಹೆಸರು ಮಾಡಲು ಅದ್ಭುತವಾದ ಅವಕಾಶಗಳು ದೊರೆಯುತ್ತವೆ. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ ಗುರಿಯನ್ನು ತಲುಪಲಿದ್ದೀರಿ. ಕೋರ್ಟ್ ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅದಕ್ಕಾಗಿ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಶುಭದಿನ: 21. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.




ಕೌಟುಂಬಿಕ ವಿಚಾರಗಳಲ್ಲಿ ಪ್ರಗತಿ. ಮಾರಾಟ ವಿಭಾಗದಲ್ಲಿ ಇದ್ದವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಮದುವೆ ಸಂಬಂಧಗಳನ್ನು ಹುಡುಕುತ್ತಿದ್ದಲ್ಲಿ ಯಶಸ್ಸು ಕಾಣುವ ಅವಕಾಶ ಹೆಚ್ಚಾಗಿದೆ. ಶುಭದಿನ: 19. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.

ವಾರ ಪೂರ್ತಿ ಕೆಲಸದಲ್ಲೇ ನಿರತರಾಗುವಿರಿ. ಅನಾರೋಗ್ಯ ಉಂಟಾಗುವ ಸಂಭವವಿದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವಿರಿ. ಉದ್ಯೋಗಿಗಳಿಗೆ ನೀವು ಪಟ್ಟ ಶ್ರಮಕ್ಕೆ ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಆದಾಯದಲ್ಲಿ ಹೆಚ್ಚಳ ಆಗಲಿದೆ. ಇದರಿಂದ ನಿಮಗೆ ಸಂತೋಷ ಸಮಾಧಾನ ಮೂಡಲಿದೆ. ಶುಭದಿನ: 24 ಲಿಂಗಾಷ್ಟಕ ಪಠಿಸಿರಿ.

